# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- RIDF ಅಡಿ ಸೂಕ್ಷ್ಮ ನೀರಾವರಿ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ನಾಲ್ಕನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:- 1. ಸರ್ಕಾರದ ಆದೇಶ ಸಂಖ್ಯೆ: ಕೃಇ 70 ಕೃಯೋಕಾ 2018 ದಿ: 10-04-2018.
2. ಸರ್ಕಾರದ ಆದೇಶ ಸಂಖ್ಯೆ: ಕೃಇ 126 ಕೃಯೋಕಾ 2017, ಬೆಂಗಳೂರು, ದಿನಾಂಕ 30-07-2018.
3. ಸರ್ಕಾರದ ಆದೇಶ ಸಂಖ್ಯೆ: ಕೃಇ 126 ಕೃಯೋಕಾ 2017, ಬೆಂಗಳೂರು, ದಿನಾಂಕ 18-09-2018.
4. ಸರ್ಕಾರದ ಆದೇಶ ಸಂಖ್ಯೆ: ಕೃಇ 126 ಕೃಯೋಕಾ 2017, ಬೆಂಗಳೂರು, ದಿನಾಂಕ 19-11-2018.
5. ಸರ್ಕಾರದ ಆದೇಶ ಸಂಖ್ಯೆ: ಕೃಇ 126 ಕೃಯೋಕಾ 2017, ಬೆಂಗಳೂರು, ದಿನಾಂಕ 23-01-2019.
6. ಕೃಷಿ ಆಯುಕ್ತರವರ ಪ್ರಸ್ತಾವನೆ ಸಂಖ್ಯೆ: ಉಕೃನಿ/ಕೃಯಾಂ&ಸೂನೀ/ಸೂನೀ/RIDF/2018-19 ದಿನಾಂಕ 04-02-2019.

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ಕೃಷಿ ಮತ್ತು ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ 2017-18ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2018-19ನೇ ಸಾಲಿನಲ್ಲಿ ಮುಂದುವರೆಸಿ ಆದೇಶಿಸಿದೆ.

ಮೇಲೆ (2) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, 2018-19ನೇ ಸಾಲಿನಲ್ಲಿ "Installation of Micro Irrigation Systems" RIDF-21 & 22 Tranche ಅಡಿಯಲ್ಲಿ ಅನುಮೋದನೆಯಾಗಿರುವ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಲೆಕ್ಕ ಶೀರ್ಷಿಕೆ: 2401-00-108-1-15 ಉಪ ಶೀರ್ಷಿಕೆ-436 ರಡಿಯಲ್ಲಿ ಒದಗಿಸಲಾದ ರೂ.1724.00 ಲಕ್ಷಗಳ ಅನುದಾನದಲ್ಲಿ ಮೊದಲನೇ ಕಂತಿನ ಅನುದಾನ ಶೇ.25% ಅಂದರೆ ರೂ.431.00 ಲಕ್ಷಗಳನ್ನು ಅನುದಾನದಲ್ಲಿ ಲಭ್ಯತೆಯನ್ನಾಧರಿಸಿ ಬಿಡುಗಡೆ ಮಾಡಿ ಆದೇಶಿಸಿದೆ.

ಮೇಲೆ (3)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, 2018-19ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ: 2401-00-108-1-15 ಉಪ ಶೀರ್ಷಿಕೆ-436 ರಡಿಯಲ್ಲಿ ರೂ.1724.00 ಲಕ್ಷ ಅನುದಾನವನ್ನು ಒದಗಿಸಲಾಗಿತ್ತು. ಪರಿಷ್ಕೃತ ಆಯವ್ಯಯದಲ್ಲಿ ರೂ.2619.00 ಲಕ್ಷಗಳನ್ನು ಒದಗಿಸಿರುವುದರಿಂದ, ಈಗಾಗಲೇ ಬಿಡುಗಡೆ ಮಾಡಲಾಗಿರುವ ಮೊದಲನೇ ಕಂತಿನ ಅನುದಾನ ರೂ.431.00 ಲಕ್ಷಗಳಂತೆ ಪರಿಷ್ಕೃತ ಆಯವ್ಯಯಕ್ಕೆ ಪೂರಕವಾಗಿ ಮೊದಲ ಕಂತಿನಲ್ಲಿ ಬಾಕಿ ಉಳಿದಿರುವ ರೂ.223.75 ಲಕ್ಷಗಳನ್ನು ಅನುದಾನದ ಲಭ್ಯತೆಯನ್ನಾಧರಿಸಿ ಬಿಡುಗಡೆ ಮಾಡಿ ಆದೇಶಿಸಿದೆ.

ಮೇಲೆ (4) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, 2018-19ನೇ ಸಾಲಿನ ಪರಿಷ್ಕೃತ ಆಯವ್ಯಯದ ಅನ್ವಯ ಎರಡನೇ ಕಂತಿನ ರೂ.654.75 ಲಕ್ಷಗಳನ್ನು ಅನುದಾನದ ಲಭ್ಯತೆಯನ್ನಾಧರಿಸಿ ಬಿಡುಗಡೆ ಮಾಡಿ ಆದೇಶಿಸಿದೆ.

..2)

ಮೇಲೆ (5)ರ ಓದಲಾದ ಸರ್ಕಾರದ ಆದೇಶದಲ್ಲಿ, 2018–19ನೇ ಸಾಲಿನ ಪರಿಷ್ಕೃತ ಆಯವ್ಯಯದ ಅನ್ವಯ ಮೂರನೇ ಕಂತಿನ ರೂ.654.75 ಲಕ್ಷಗಳನ್ನು ಅನುದಾನದ ಲಭ್ಯತೆಯನ್ನಾಧರಿಸಿ ಬಿಡುಗಡೆ ಮಾಡಿ ಆದೇಶಿಸಿದೆ.

ಮೇಲೆ (6) ರಲ್ಲಿ ಓದಲಾದ ಕೃಷಿ ನಿರ್ದೇಶಕರವರ ಪ್ರಸ್ತಾವನೆಯಲ್ಲಿ, ಆರ್.ಐ.ಡಿ.ಎಫ್. ಅಡಿ ಸೂಕ್ಷ್ಮ ನೀರಾವರಿ ಕಾರ್ಯಕ್ರಮದ ಅನುಷ್ಠಾನಕ್ಕಾಗಿ, 2018–19ನೇ ಸಾಲಿನ ಪರಿಷ್ಕೃತ ಆಯವ್ಯಯದಲ್ಲಿ ಎನ್.ಎಂ.ಎಸ್.ಎ – ಮುಖ್ಯಮಂತ್ರಿಗಳ ಸೂಕ್ಷ್ಮ ನೀರಾವರಿ ಯೋಜನೆ ಲೆಕ್ಕ ಶೀರ್ಷಿಕೆ: 2401–00–108–1–15 ಉಪ ಶೀರ್ಷಿಕೆ–436 ಕ್ಕೆ ನಬಾರ್ಡ್ ಕಾಮಗಾರಿಗಳಿಗೆ ರೂ.2619.00 ಲಕ್ಷಗಳನ್ನು ಒದಗಿಸಲಾಗಿದ್ದು ಈ ಪೈಕಿ ಈಗಾಗಲೇ ಬಿಡುಗಡೆಗೊಳಿಸಿರುವ ರೂ.1964.25ಲಕ್ಷಗಳ ಪೈಕಿ ರೂ.1681.17 ಲಕ್ಷಗಳ ಅನುದಾನ ಖರ್ಚುಮಾಡಲಾಗಿದೆ ಅಲ್ಲದೇ, ರೂ.1238.90ಲಕ್ಷಗಳ ಮೊತ್ತಕ್ಕೆ ಪುನರ್‌ಭರಣ ಕ್ಲೇಮುಗಳನ್ನು ನಬಾರ್ಡ್ ಸಂಸ್ಥೆಗೆ ಸಲ್ಲಿಸಿದ್ದು ಉಳಿದ ರೂ.442.27 ಲಕ್ಷಗಳ ಮೊತ್ತಕ್ಕೂ ಸಹ ಕ್ಲೇಮ್‌ನ್ನು ನಬಾರ್ಡ್ ಸಂಸ್ಥೆಗೆ ಸಲ್ಲಿಸುವುದಾಗಿ ತಿಳಿಸುತ್ತಾ, ಪರಿಷ್ಕೃತ ಆಯವ್ಯಯದ ಅನ್ವಯ ನಾಲ್ಕನೇ ಕಂತಿನ ರೂ.654.75 ಲಕ್ಷಗಳನ್ನು ಬಿಡುಗಡೆ ಮಾಡಿ ಸರ್ಕಾರದ ಆದೇಶ ಹೊರಡಿಸಿರುವಂತೆ ಕೋರಿರುತ್ತಾರೆ.

ಕೃಷಿ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದು, 4ನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ ತೀರ್ಮಾನಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂ: ಕೃಇ 126 ಕೃಯೋಕಾ 2017, ಬೆಂಗಳೂರು, ದಿನಾಂಕ: 15–02–2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, **2018–19ನೇ ಸಾಲಿನ ಪರಿಷ್ಕೃತ ಆಯವ್ಯಯದಲ್ಲಿ (ಜುಲೈ) "Installation of Micro Irrigation System RIDF-21 & 22 tranche" ಅಡಿಯಲ್ಲಿ ಅನುಮೋದನೆಯಾಗಿರುವ ಕಾರ್ಯಕ್ರಮದ ಅನುಷ್ಠಾವಕ್ಕಾಗಿ ಲೆಕ್ಕ ಶೀರ್ಷಿಕೆ: 2401–00–108–1–15 ಉಪ ಶೀರ್ಷಿಕೆ–436 ರಡಿ ನಾಲ್ಕನೇ ಕಂತಿನ ಅನುದಾನ ರೂ.654.75 (ಆರು ನೂರ ಐವತ್ತನಾಲ್ಕು ಲಕ್ಷ ಎಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ) ಲಕ್ಷಗಳನ್ನು ಅನುದಾನದ ಲಭ್ಯತೆಯನ್ನಾಧರಿಸಿ ಬಿಡುಗಡೆ ಮಾಡಿ ಆದೇಶಿಸಿದೆ.**

ಕೃಷಿ ಆಯುಕ್ತರು ಮೇಲ್ಕಂಡ ಯೋಜನೆಯಡಿಯಲ್ಲಿ ಆದ ವೆಚ್ಚಕ್ಕೆ ಮರುಪಾವತಿ ಕ್ಲೈಮ್‌ಗಳನ್ನು ಕೂಡಲೇ ನಬಾರ್ಡ್ ಸಂಸ್ಥೆಗೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಕೃಇ 38 ಆಂಆಸ 2018 ದಿನಾಂಕ 15.02.2019 ಹಾಗೂ ಸರ್ಕಾರದ ಅದೇಶ ಸಂಖ್ಯೆ: ಎಫ್‌ಡಿ 4 ಟಿಎಫ್‌ಪಿ 2018 ದಿನಾಂಕ **08–01–2019** ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ)

**ಇವರಿಗೆ:–**

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು–01.

2) ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್•ಭವನ, ಬೆಂಗಳೂರು-01.
3) ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ತೋಟಗಾರಿಕೆ ಇಲಾಖೆ.
5) ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
6) ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
7) ಪ್ರಧಾನ ವ್ಯವಸ್ಥಾಪಕರು, ನಬಾರ್ಡ್, ನಂ.46, ಕೆಂಪೇಗೌಡ ರಸ್ತೆ, ಬೆಂಗಳೂರು-09.
8) ಉಪ ಪ್ರಧಾನ ವ್ಯವಸ್ಥಾಪಕರು, ನಬಾರ್ಡ್, ನಂ.46, ಕೆಂಪೇಗೌಡ ರಸ್ತೆ, ಬೆಂಗಳೂರು-09.
9) ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸಾಂಸ್ಥಿಕ ಹಣಕಾಸು), ಬೆಂಗಳೂರು.
10) ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ಬೆಂಗಳೂರು.
11) ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಇಲಾಖೆ, ಕೃಷಿ ಇಲಾಖೆ.
12) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
13) ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
14) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-4), ಬೆಂಗಳೂರು.
15) ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
16) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
17) ಸರ್ಕಾರದ ಉಪ ಕಾರ್ಯದರ್ಶಿ-1 & 2 ರವರ ಆಪ್ತ ಸಹಾಯಕರು, ಕೃಷಿ ಇಲಾಖೆ.
18) ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.